# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **803**

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ|| ಎಂ.ಜಿ ಮುಳೆ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 16.12.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಒಟ್ಟು ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;(ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಈ ಕೆಳಕಂಡಂತೆ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ. |

| ವಿವರ | ಪಡಿತರ ಚೀಟಿಗಳು | ಫಲಾನುಭವಿಗಳು |
|---|---|---|
| ಅಂತ್ಯೋದಯ ಅನ್ನ ಪಡಿತರ ಚೀಟಿಗಳು | 10,80,648 | 43,66,756 |
| ಎನ್.ಎಫ್.ಎಸ್.ಎ. ಆದ್ಯತಾ ಪಡಿತರ ಚೀಟಿಗಳು | 1,02,84,000 | 3,60,17,772 |
| ರಾಜ್ಯ ಆದ್ಯತಾ ಪಡಿತರ ಚೀಟಿಗಳು | 14,74,582 | 38,71,596 |
| ಒಟ್ಟು ಆದ್ಯತಾ ಪಡಿತರ ಚೀಟಿಗಳು | 1,28,39,230 | 4,42,56,124 |
| ಆದ್ಯತೇತರ ಪಡಿತರ ಚೀಟಿಗಳು | 25,25,418 | 86,45,628 |
| ಒಟ್ಟು | 1,53,64,648 | 5,29,01,752 |

ಜಿಲ್ಲಾವಾರು ವಿವರವನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.

| | | |
|---|---|---|
| ಆ | ಬಿಪಿಎಲ್ ಕಾರ್ಡ್‌ಗಳನ್ನು ನೀಡುವಾಗ ಸರ್ಕಾರ ನಿಗಧಿಪಡಿಸಿರುವ ನಿಯಮ ಹಾಗೂ ಮಾನದಂಡಗಳೇನು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಇ | ಪ್ರಸ್ತುತ ರಾಜ್ಯದಲ್ಲಿ ಒಟ್ಟು ಎಷ್ಟು ಅಕ್ರಮವಾಗಿ ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿರುವವರನ್ನು ಗುರುತಿಸಲಾಗಿದೆ; | 2023-24ನೇ ಸಾಲಿನಲ್ಲಿ ಒಟ್ಟು 74342 ಆದ್ಯತಾ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದ್ದು, 2024-25ನೇ ಸಾಲಿನಲ್ಲಿ 16719 ಆದ್ಯತಾ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ. |
| ಈ | ಅಕ್ರಮ ಬಿಪಿಎಲ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಮಾನದಂಡಗಳ ವಿರುದ್ಧವಾಗಿ ಪಡಿತರ ಚೀಟಿ ಪಡೆದವರ ಮಾಹಿತಿಯನ್ನು ಕುಟುಂಬ ತಂತ್ರಾಂಶದಿಂದ ಪಡೆದಿದ್ದು, ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ಆದಾಯ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ |

| | | |
|---|---|---|
| | | ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 6 ತಿಂಗಳಿನಿಂದ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆಯಲಾಗಿರುತ್ತದೆ. ಅದರಂತೆ ಸರ್ಕಾರಿ ನೌಕರರು ಹಾಗೂ ಆದಾಯ ತೆರಿಗೆ ಪಾವತಿದಾರರ ಪಡಿತರ ಚೀಟಿಗಳನ್ನು ಆದ್ಯತೇತರ (NPHH) ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿರುತ್ತದೆ. |
| ಉ | ಈಗಾಗಲೇ ಅಕ್ರಮ ಕಾರ್ಡ್‌ಗಳನ್ನು ನೀಡಿರುವವರನ್ನು ಯಾವ ರೀತಿ ಪತ್ತೆ ಹಚ್ಚಿ ಶಿಕ್ಷೆಗೆ ಒಳಪಡಿಸಲಾಗುತ್ತದೆ; | ಆದ್ಯತಾ ಪಡಿತರ ಚೀಟಿ ಹೊಂದಲು ಅನರ್ಹವೆಂದು ಗುರುತಿಸಲಾದ ಫಲಾನುಭವಿಗಳ ಪಡಿತರ ಚೀಟಿಗಳನ್ನು ಆದ್ಯತೇತರ (ಎಪಿಎಲ್) ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಿ, ದಂಡವನ್ನು ವಸೂಲು ಮಾಡಲಾಗುತ್ತಿದೆ.<br>ರಾಜ್ಯಾದ್ಯಂತ ಜನವರಿ-2021 ರಿಂದ ಮೇ-2023ರ ಅವಧಿಯಲ್ಲಿ 3,35,463 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ರೂ. 13,51,30,858/-ಗಳನ್ನು ದಂಡವನ್ನು ವಿಧಿಸಲಾಗಿರುತ್ತದೆ. |

**ಆನಾಸ 399 ಡಿಆರ್‌ಎ 2024**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು